ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 01 V3 ಸಿಡಿಸಿ(2) 2018-19/2895

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು-560 001
ದಿ: 01-02-2019.

## -:ಸುತ್ತೋಲೆ:-

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳು ಎನ್.ಐ.ಟಿ.ಟಿ.ಟಿ.ಆರ್., ಚೆನ್ನೈ, ಇವರು ಎನ್.ಐ.ಟಿ.ಟಿ.ಟಿ.ಆರ್., ವಿಸ್ತರಣಾ ಕೇಂದ್ರ,ಬೆಂಗಳೂರು,ಇವರ ಸಹಯೋಗದೊಂದಿಗೆ ದಿನಾಂಕ:06-02-2019 ರಂದು ಸರ್ಕಾರಿ ಮುದ್ರಣ ತಂತ್ರಜ್ಞಾನ ಸಂಸ್ಥೆ, ಬೆಂಗಳೂರು, ಇಲ್ಲಿ ನಡೆಯುವ ಕಾರ್ಯಗಾರಕ್ಕೆ ಹಾಜರಾಗುವ ಬಗ್ಗೆ.

ಉಲ್ಲೇಖ: ನಿರ್ದೇಶಕರು, ಎನ್.ಐ.ಟಿ.ಟಿ.ಟಿ.ಆರ್. ಚೆನ್ನೈ ಇವರ ಪತ್ರ ಸಂಖ್ಯೆ: NITTTR/ CCDPC /BWS-KAR/PRO/2018-19, ದಿನಾಂಕ:29-01-2019.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ, ಎನ್.ಐ.ಟಿ.ಟಿ.ಟಿ.ಆರ್., ಚೆನ್ನೈ ಇವರು ಎನ್.ಐ.ಟಿ.ಟಿ.ಟಿ.ಆರ್., ವಿಸ್ತರಣಾ ಕೇಂದ್ರ, ಬೆಂಗಳೂರು, ಇವರ ಸಹಯೋಗದೊಂದಿಗೆ ಸರ್ಕಾರಿ ಮುದ್ರಣ ತಂತ್ರಜ್ಞಾನ ಸಂಸ್ಥೆ, ಬೆಂಗಳೂರು ಇಲ್ಲಿನ ಸಭಾಂಗಣದಲ್ಲಿ ದಿನಾಂಕ:06-02-2019ರಂದು **"The training needs and issues related to Quality improvement in Technical Education"** ಎಂಬ ವಿಷಯದ ಬಗ್ಗೆ ಚರ್ಚಿಸುವ ಸಲುವಾಗಿ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಒಂದು ದಿನದ ಕಾರ್ಯಗಾರವನ್ನು ಏರ್ಪಡಿಸಲಾಗಿದೆ.

ತತ್ಸಂಬಂಧ, ಸದರಿ ಕಾರ್ಯಗಾರಕ್ಕೆ ದಿನಾಂಕ:06-02-2019ರಂದು ಬೆಳಿಗ್ಗೆ 9.30ಗಂಟೆಗೆ ಸರ್ಕಾರಿ ಮುದ್ರಣ ತಂತ್ರಜ್ಞಾನ ಸಂಸ್ಥೆ, ಬೆಂಗಳೂರು, ಇಲ್ಲಿ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳು ತಪ್ಪದೆ ಹಾಜರಾಗಲು ಸೂಚಿಸಲಾಗಿದೆ. ಸದರಿ ಕಾರ್ಯಗಾರದಲ್ಲಿ ಭಾಗವಹಿಸಿ, ತಾಂತ್ರಿಕ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವ ಮತ್ತು ಅಲ್ಪಾವಧಿ ತರಬೇತಿಗಳ ಅಗತ್ಯತೆಗಳ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ನೀಡಲು ತಿಳಿಸಿಲಾಗಿದೆ. ಸದರಿ ಕಾರ್ಯಗಾರದಲ್ಲಿ ಭಾಗವಹಿಸುವ ಪ್ರಾಚಾರ್ಯರುಗಳಿಗೆ ಪ್ರಯಾಣ ಹಾಗೂ ದಿನ ಭತ್ಯೆಗಳನ್ನು ಎನ್.ಐ.ಟಿ.ಟಿ.ಟಿ.ಆರ್., ನಿಯಮಾನುಸಾರ ನೀಡಲಾಗುವುದು. ಸದರಿ ಕಾರ್ಯಗಾರದ ಅವಧಿಯ ಅನುಪಸ್ಥಿತಿಯನ್ನು OOD ಎಂದು ಪರಿಗಣಿಸಲು ಸೂಚಿಸಲಾಗಿದೆ.

ನಿರ್ದೇಶಕರು

ಇವರಿಗೆ:-

1. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ
2. ಪ್ರಾಚಾರ್ಯರು, ಸರ್ಕಾರಿ ಮುದ್ರಣ ತಂತ್ರಜ್ಞಾನ ಸಂಸ್ಥೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪ್ರತಿ:-

ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.